**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 166/2020**

**ಚಾ.ಸಾ-6**

**ಪ್ರಾ.ಸಾ-6**

**ಸಾಕ್ಷಿಗೆ ದಿನಾಂಕ 24-09-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಶರಣಪ್ಪ |
| ತಂದೆಯ ಹೆಸರು | ಃ | ತಿಪ್ಪಣ್ಣ |
| ವಯಸ್ಸು | ಃ | 35 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಇಜೇರಿ |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ಆರೋಪಿತರು ಗೊತ್ತಿಲ್ಲ. ಚಾಸಾ-1, 4, 5, 7 ರಿಂದ 10 ಗೊತ್ತಿಲ್ಲ. ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನಾನು ಸಹಿ ಮಾಡಿರುತ್ತೇನೆ. ಆರೋಪಿತರು ಮತ್ತು ಚಾಸಾ-1, 4 ಮತ್ತು 5ರವರ ಮಧ್ಯೆ ಜಗಳ ಆಗಿರುವ ವಿಷಯ ಗೊತ್ತಿಲ್ಲ. ಆರೋಪಿತರು ಚಾಸಾ-1, 4 ಮತ್ತು 5ರವರಿಗೆ ಕೈಯಿಂದ ಮತ್ತು ಕಟ್ಟಿಗೆಯಿಂದ ಹೊಡೆ ಬಡೆ ಮಾಡಿರುವ ವಿಚಾರ ಗೊತ್ತಿಲ್ಲ. ಚಾಸಾ-1 ಮತ್ತು 5ರವರಿಗೆ ಬಟ್ಟೆ ಹಿಡಿದು ಅವಮಾನ ಮಾಡಿರುವ ವಿಷಯ ಗೊತ್ತಿಲ್ಲ. ಆರೋಪಿತರು ಅಕ್ರಮ ಕೂಟ ಕಟ್ಟಿಕೊಂಡು ಬಂದು ಜಗಳ ಮಾಡಿರುವ ವಿಚಾರ ಗೊತ್ತಿಲ್ಲ. ಆರೋಪಿತರು ಚಾಸಾ-1, 4 ಮತ್ತು 5ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಜೀವದ ಭಯ ಹಾಕಿರುವ ವಿಚಾರ ಗೊತ್ತಿಲ್ಲ. ಈ ಬಗಗೆ ನಾನು ಹೇಳಿಕೆ ನೀಡಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ದಿಃ 05-04-2020ರಂದು ಬೆಳಿಗ್ಗೆ 8 ಗಂಟೆ ಸುಮಾರಿಗೆ ಹೊಲದ ಒಡ್ಡಿನ ವಿಚಾರವಾಗಿ ಆರೋಪಿತರು ಅಕ್ರಮ ಕೂಟ ಕಟ್ಟಿಕೊಂಡು ಬಂದು ಚಾಸಾ-1, 4 ಮತ್ತು 5ರವರೊಂದಿಗೆ ಗಲಾಟೆ

ಮಾಡಿರುತ್ತಾರೆ ಎಂದರೆ ಗೊತ್ತಿಲ್ಲ. ಅದೇ ವಿಚಾರವಾಗಿ 1ನೇ ಆರೋಪಿಯು ಚಾಸಾ-1ರವರು ಅವರಿಗೆ ಸೇರಿದ ತಿಪ್ಪೆ ಕಸವನ್ನು ಯಾಕೆ ತುಂಬಿಕೊಂಡು ಹೋಗುತ್ತೀದ್ದೀರಿ ಎಂದು ಕೇಳಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಚಾಸಾ-1, 4 ಮತ್ತು 5ರವರಿಗೆ ಅವಾಚ್ಯ ಶಬ್ದಗಳಿಂದ ಬೈದು 1ನೇ ಆರೋಪಿಯು ಚಾಸಾ-4ರವರ ಬೆನ್ನಿನ ಮೇಲೆ ಮತ್ತು ಭುಜದ ಮೇಲೆ ಬಡಿಗೆಯಿಂದ ಹೊಡೆದಿರುತ್ತಾನೆ ಎಂದರೆ ಗೊತ್ತಿಲ್ಲ. 2ನೇ ಆರೋಪಿ ಚಾಸಾ-4ರವರಿಗೆ ಕೈಯಿಂದ ಎದೆಯ ಮೇಲೆ ಕಪಾಳಕ್ಕೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಜಗಳ ಬಿಡಿಸಲು ಬಂದ ಚಾಸಾ-1ರವರಿಗೆ 3ನೇ ಆರೋಪಿಯು ಅವರ ಮೈಮೇಲೆ ಇರುವ ಬಟ್ಟೆಯನ್ನು ಹಿಡಿದು ಎಳೆದಾಡಿರುತ್ತಾನೆ ಎಂದರೆ ಗೊತ್ತಿಲ್ಲ. 1ನೇ ಆರೋಪಿಯು ಚಾಸಾ-4ರವರಿಗೆ ಕೈಯಿಂದ ಹೊಡೆದು ಅವರ ಸೊಂಟಕ್ಕೆ ಕಾಲಿನಿಂದ ಒದ್ದಿರುತ್ತಾನೆ ಎಂದರೆ ಗೊತ್ತಿಲ್ಲ. ಚಾಸಾ-5ರವರಿಗೆ 6ನೇ ಆರೋಪಿಯು ಬಡಿಗೆಯಿಂದ ಎರಡು ಕಾಲು , ಕೈಗಳ ಮೇಲೆ ಬೆನ್ನಿನ ಮೇಲೆ ಹೊಡೆದಿರುತ್ತಾನೆ ಎಂದರೆ ಗೊತ್ತಿಲ್ಲ, 7ನೇ ಆ್ರೋಪಿಯು ಚಾಸಾ-5ರವರಿಗೆ ಕಪಾಳಕ್ಕೆ ಹೊಡೆದಿರುತ್ತಾನೆ ಎಂದರೆ ಗೊತ್ತಿಲ್ಲ. 8ನೇ ಅರೋಪಿಯು ಚಾಸಾ-5ರವರ ಕೂದಲು ಹಿಡಿದು ಎಳೆದಾಡಿರುತ್ತಾಳೆ ಎಂದರೆ ಗೊತ್ತಿಲ್ಲ. ಆರೋಪಿತರು ಚಾಸಾ-1, 4 ಮತ್ತು 5ರವರಿಗೆ ಇನ್ನೊಮ್ಮೆ ನಮ್ಮ ತಂಟೆಗೆ ಬಂದರೆ ಜೀವ ಸಹಿತ ಬಿಡುವುದಿಲ್ಲ ಎಂದು ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಗೊತ್ತಿಲ್ಲ.

ದಿನಾಂಕ 06-04-2020 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೀರಿ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು. ನಿಮಗೆ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಈ ರೀತಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ಪರ ವಕೀಲರ ಪರವಾಗಿ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತುಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ